ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ದೇಶೀಯ ವಿದ್ಯಾಪೀಠ ಬಾಲಕರ ಪೌಢ ಶಾಲಾ ಮುಖ್ಯೋಪಾಧ್ಯಾಯರ ಹುದ್ದೆಯ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

425 (527) ಮಾನ್ಯ ಪ್ರಾಥಮಿಕ ಮತ್ತು ಪೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕು ದೇಶಿಯ ವಿದ್ಯಾಪೀಠ ಬಾಲಕರ ಪೌಢ ಶಾಲೆ ಈ ಸಂಸ್ಥೆಯ ಮುಖ್ಯೋಪಾಧ್ಯಾಯರ ಹುದ್ದೆಗೆ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ;

(ಆ) ಪ್ರಸ್ತಾವನೆ ಸಲ್ಲಿಸಿದ್ದಲ್ಲಿ, ಅನುಮೋದನೆ ನೀಡಲಾಗಿದೆಯೇ; ನೀಡದೆ ಇದ್ದಲ್ಲಿ ಯಾವ ಕಾರಣಕ್ಕೆ ಪ್ರಸ್ತಾವನೆಯನ್ನು ವಿಲೆ (ಬಾಕಿ) ಇಡಲಾಗಿದೆ ;

(ಇ) ದೇಶೀಯ ವಿದ್ಯಾಪೀಠ ಸಂಸ್ಥೆಯಲ್ಲಿ ಕಳೆದ 3 ವರ್ಷಗಳಿಂದ ಎಷ್ಟು ಬಾರಿ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ ;

(ಈ) ಅನುಮೋದನೆ ನೀಡದಿದ್ದಲ್ಲಿ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು ;

(ಊ) ಮುಖ್ಯೋಪಾಧ್ಯಾಯರು ಸದರಿ ಹುದ್ದೆಯಿಂದ ಅನುಮೋದನೆಗೊಳ್ಳದೆ ನಿವೃತ್ತಿಯಾದರೆ ಅವರಿಗೆ ವೇತನ ಸೌಲಭ್ಯ ಕಡಿತವಾಗಲಿದ್ದು, ಅದನ್ನು ಸರಿದೂಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?